# ಕರ್ನಾಟಕ ವಿಧಾನ ಪರಿಷತ್

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 863 (932) |
| **ಸದಸ್ಯರ ಹೆಸರು** | ಶ್ರೀ ಬಿ.ಜಿ ಪಾಟೀಲ್<br>(ಸ್ಥಳೀಯ ಸಂಸ್ಥೆಗಳಿಂದ<br>ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ:** | 14.03.2025 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮೀಣ ಪ್ರಗತಿ ಪಥ ಯೋಜನೆ ಜಾರಿಯಲ್ಲಿದೆಯೇ: ಜಾರಿಯಲ್ಲಿದ್ದಲ್ಲಿ, ಸದರಿ ಯೋಜನೆಯು ಯಾವ ಹಂತದಲ್ಲಿದೆ: (ವಿವರ ನೀಡುವುದು) | ಪ್ರಗತಿ ಪಥ ಯೋಜನೆಯು ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ಜಾರಿಯಲ್ಲಿದ್ದು, ಅದರಂತೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿಯೂ ಜಾರಿಯಲ್ಲಿರುತ್ತದೆ.<br>• ಬಾಹ್ಯ ನೆರವಿನ ಪ್ರಗತಿಪಥ ಯೋಜನೆಯಡಿ 9,450 ಕಿ.ಮೀ ಉದ್ದದ ಗ್ರಾಮೀಣ ರಸ್ತೆಗಳನ್ನು ರೂ.5,200 ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿರುತ್ತದೆ.<br>• ಪ್ರಗತಿ ಪಥ ಯೋಜನೆಯಡಿ 9,450 ಕಿ.ಮೀ ಬದಲಿಗೆ 7,110.00 ಕಿ.ಮೀ ಉದ್ದದ ಗ್ರಾಮೀಣ ರಸ್ತೆಗಳನ್ನು ರೂ.5,190 ಕೋಟಿಗಳಲ್ಲಿ ಅಭಿವೃದ್ಧಿಪಡಿಸಲು ದಿನಾಂಕ:12.03.2024 ರಂದು ಸರ್ಕಾರದಿಂದ ಪರಿಷ್ಕೃತ ಅನುಮೋದನೆಯನ್ನು ನೀಡಲಾಗಿರುತ್ತದೆ.<br>• ಅದರಂತೆ ದಿನಾಂಕ: 20.06.2024 ರಂದು ನಡೆದ ರಾಜ್ಯ ಸಚಿವ ಸಂಪುಟದಲ್ಲಿ ಯೋಜನೆಯ ಅನುಷ್ಠಾನಕ್ಕೆ ಅನುಮೋದನೆ ನೀಡಲಾಗಿರುತ್ತದೆ ಹಾಗೂ ಪ್ರಸ್ತಾಪಿತ ಯೋಜನೆಗೆ ದಿನಾಂಕ: 02.07.2024 ರಂದು ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br>• ದಿನಾಂಕ: 15.07.2024 ರಂದು Preliminary Project Report (PPR) ವರದಿಯನ್ನು ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆ (D.E.A) ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲಾಗಿರುತ್ತದೆ.<br>• ದಿನಾಂಕ: 23.09.2024 ರಂದು ಕೇಂದ್ರ |

| | | |
|---|---|---|
| | | ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯು ಆರ್ಥಿಕ ವ್ಯವಹಾರಗಳ ಇಲಾಖೆಗೆ ಸಹಮತ ನೀಡಿರುತ್ತದೆ ಹಾಗೂ ನೀತಿ ಆಯೋಗವು ದಿನಾಂಕ: 11.11.2024ರಂದು ಸಹಮತವನ್ನು ನೀಡಿರುತ್ತದೆ.<br>• ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆ (D.E.A) ಯು ತಾತ್ವಿಕ ಸಹಮತಿಯನ್ನು ನೀಡಿ ಯೋಜನೆಯನ್ನು ಅನುಮೋದಿಸುವ ಬಗ್ಗೆ ಮುಂದಿನ ಕ್ರಮವಹಿಸಲು Asian Development Bank ರವರಿಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.<br>• ಪ್ರಗತಿಪಥ ಯೋಜನೆಯ ಶೀಘ್ರ ಅನುಷ್ಠಾನದ ದೃಷ್ಠಿಯಿಂದ ಗ್ರಾಮಪಥ ತಂತ್ರಾಂಶದಲ್ಲಿ ಅರ್ಹ ರಸ್ತೆಗಳ ಆಯ್ಕೆ ಪ್ರಕ್ರಿಯೆಯು ಮುಕ್ತಾಯದ ಹಂತದಲ್ಲಿದ್ದು, ಸದರಿ ಯೋಜನೆಗೆ ಇನ್ನೂ ಚಾಲನೆ ನೀಡಿರುವುದಿಲ್ಲ. |
| ಆ. | ಸದರಿ ಯೋಜನೆಗೆ ಬಿಡುಗಡೆಯಾದ ಮೊತ್ತ ಎಷ್ಟು: (ಜಿಲ್ಲಾವಾರು ವಿವರ ನೀಡುವುದು) | ಪ್ರಸ್ತುತ ಪ್ರಗತಿಪಥ ಯೋಜನೆಯಡಿ ಅರ್ಹ ರಸ್ತೆಗಳ ಆಯ್ಕೆ ಪ್ರಕ್ರಿಯೆ ಹಾಗೂ ಯೋಜನೆಯ ಪೂರ್ವಸಿದ್ಧತ ನಡೆಸುತ್ತಿರುವ ಹಂತದಲ್ಲಿರುವ ಪ್ರಯುಕ್ತ ಸದರಿ ಯೋಜನೆಗೆ ಯಾವುದೇ ಅನುದಾನವು ಬಿಡುಗಡೆಯಾಗಿರುವುದಿಲ್ಲ. |
| ಇ. | ಈ ಯೋಜನೆಗೆ ಒಟ್ಟು ಎಷ್ಟು ವೆಚ್ಚ ಮಾಡಲಾಗುತ್ತಿದೆ; ಹಾಗೂ ಇದರ ಹಣಕಾಸು ನಿರ್ವಹಣೆಯನ್ನು ಹೇಗೆ ನಿರ್ವಹಿಸಲಾಗುವುದು; | ಪ್ರಸ್ತುತ ಈ ಯೋಜನೆಯಡಿ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ರೂ. 5,190.00 ಕೋಟಿಗಳನ್ನು ನಿಗದಿಪಡಿಸಲಾಗಿದೆ. ಈ ಪೈಕಿ ರಾಜ್ಯ ಸರ್ಕಾರದಿಂದ ಶೇ. 30 ರಷ್ಟು ಮತ್ತು ಬಾಹ್ಯ ನೆರವಿನಿಂದ ಶೇ. 70 ರಷ್ಟು ಅನುದಾನವನ್ನು ಪಡೆಯಲು ಕಾರ್ಯಕ್ರಮ ರೂಪಿಸಲಾಗಿದೆ. |
| ಈ. | ಸದರಿ ಜಿಲ್ಲೆಗಳಿಂದ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಬೇಡಿಕೆಗಳು ಸಲ್ಲಿಕೆಯಾಗಿವೆ ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಪ್ರಗತಿ ಪಥ ಯೋಜನೆಯ ಶೀಘ್ರ ಅನುಷ್ಠಾನದ ದೃಷ್ಠಿಯಿಂದ ಗ್ರಾಮಪಥ ತಂತ್ರಾಂಶದಲ್ಲಿ ಅರ್ಹ ರಸ್ತೆಗಳ ಆಯ್ಕೆ ಪ್ರಕ್ರಿಯೆಯ ಮುಕ್ತಾಯದ ಹಂತದಲ್ಲಿದ್ದು, ಈ ಪ್ರಕ್ರಿಯೆ ಮುಗಿದ ನಂತರ ರಸ್ತೆಗಳ ಆದ್ಯತಾ ಪಟ್ಟಿಯನ್ನು ಅಂತಿಮಗೊಳಿಸಲು ಕ್ರಮ ವಹಿಸಬೇಕಿದೆ. |

**<u>ಕಡತ ಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಎಲ್‌ಸಿಕ್ಯೂ/932/155ನೇಅ/ಪ್ರ.ಸಂ: 863(932)/2025</u>**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು